# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 636 (821) |
| 2 | ಸದಸ್ಯರ ಹೆಸರು | : ಶ್ರೀ ಭೀಮರಾವ್ ಬಸವರಾಜ ಪಾಟೀಲ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸುವ ಸಚಿವರು | : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| 4 | ಉತ್ತರಿಸಬೇಕಾದ ದಿನಾಂಕ | : 10-03-2026 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ತೋಟಗಾರಿಕೆ ಇಲಾಖೆಯಲ್ಲಿ ತುಂತುರು ಹನಿ ನೀರಾವರಿ ಯೋಜನೆ ಅಡಿಯಲ್ಲಿ ಸಬ್ಸಿಡಿ ಸಲುವಾಗಿ ಜಿಲ್ಲೆಯ ರೈತರು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ್ದು ಇಲ್ಲಿಯವರೆಗೆ ಕಾರ್ಯಾದೇಶ ನೀಡದೇ ಇರುವುದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗಮನಕ್ಕೆ ಬಂದಿದೆ.<br><br>ಬೀದರ್ ಜಿಲ್ಲೆಯಲ್ಲಿ ಹನಿ ನೀರಾವರಿ ಯೋಜನೆಯಡಿ ಸಹಾಯಧನ ಕೋರಿ 5067 ಅರ್ಜಿಗಳು ಬಂದಿರುತ್ತವೆ. ಈ ಪೈಕಿ ಅರ್ಹ 1843 ಅರ್ಜಿಗಳಿಗೆ ಕಾರ್ಯಾದೇಶ ನೀಡಲಾಗಿದೆ. 1555 ಅರ್ಜಿಗಳು ಹಸಿರು ತಂತ್ರಾಂಶದಲ್ಲಿ ಕಾರ್ಯಾದೇಶ ನೀಡಲು ಸಿದ್ಧವಾಗಿರುತ್ತವೆ. ಬೀದರ್ ಜಿಲ್ಲೆಗೆ ರೂ.13.36 ಕೋಟಿಗಳು ಬಿಡುಗಡೆಯಾಗಿದ್ದು, ರೂ.13.20 ಕೋಟಿಗಳನ್ನು (ಶೇ.98.78) ವಿನಿಯೋಗಿಸಲಾಗಿದೆ. ಜೇಷ್ಠತೆ ಮತ್ತು ಅನುದಾನ ಲಭ್ಯತೆಯ ಆಧಾರದ ಮೇಲೆ ರೈತರಿಗೆ ಸಹಾಯಧನ ಬಿಡುಗಡೆ ಮಾಡಲಾಗುತ್ತಿದೆ. ಹೆಚ್ಚುವರಿ ಅನುದಾನ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br><br>ಒಂದು ವೇಳೆ ಅರ್ಜಿಗಳು ಉಳಿದಲ್ಲಿ, ಅವುಗಳನ್ನು ಆದ್ಯತೆ ಮೇರೆಗೆ ಮುಂದಿನ ಆರ್ಥಿಕ ವರ್ಷದಲ್ಲಿ ವಿಲೇ ಮಾಡಲಾಗುವುದು. |
| ಆ | ಬಂದಿದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು: ಯಾವಾಗ ಕಾರ್ಯಾದೇಶ ನೀಡಲಾಗುವುದು ? (ಮಾಹಿತಿ ನೀಡುವುದು) | |

ಸಂಖ್ಯೆ: HORTI 93 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು